ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **223**

ಮಾನ್ಯ ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ: : 09-12-2020

ಉತ್ತರಿಸುವ ಮಾನ್ಯ ಸಚಿವರು : ಮಾನ್ಯ ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೃಷಿಯಲ್ಲಿ ಕಾಲಕಾಲಕ್ಕೆ ಮಣ್ಣು ನೀರು ಪರೀಕ್ಷಿಸಲು ಮತ್ತು ಇತರೆ ತಾಂತ್ರಿಕ ನೆರವಿಗಾಗಿ "ಸಂಚಾರಿ ಕೃಷಿ ಹೆಲ್ತ್ ಕ್ಲಿನಿಕ್" ಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ;	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೃಷಿ ಬೆಳೆಗಳಲ್ಲಿನ ಕೀಟ, ರೋಗ, ಕಳೆ, ಸಸ್ಯ ಪೋಷಕಾಂಶಗಳ ಕೊರತೆ, ಮಣ್ಣಿನ ಫಲವತ್ತತೆ ಕುರಿತು ತಾಂತ್ರಿಕ ಸಹಾಯವನ್ನು ಕ್ಷೇತ್ರ ಮಟ್ಟದಲ್ಲಿಯೇ ರೈತರಿಗೆ ಒದಗಿಸುವ ನಿಟ್ಟಿನಲ್ಲಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ಸ್ಥಾಪನೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
ಆ)	ಈ ತರಹದ ಕ್ಲಿನಿಕ್‌ಗಳ ಉದ್ದೇಶಕ್ಕಾಗಿ ಎಷ್ಟು ಹಣವನ್ನು ಮೀಸಲಿಡಲಾಗಿದೆ;	2019-20 ನೇ ಸಾಲಿನಲ್ಲಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಸ್ಥಾಪನೆಗಾಗಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೂ. 8.00 ಕೋಟಿಗಳ ಅನುದಾನವನ್ನು ಒದಗಿಸಲಾಗಿತ್ತು. ಆದರೆ ಕೋವಿಡ್-19 ರ ಕಾರಣದಿಂದ ಅನುಷ್ಠಾನ ಮಾಡಲು ಸಾಧ್ಯವಾಗದ ಕಾರಣ 2020-21 ನೇ ಸಾಲಿನಲ್ಲಿ ಮರುಮೌಲ್ಯೀಕರಣಗೊಳಿಸಿ ಅನುದಾನವನ್ನು ಒದಗಿಸಲಾಗಿರುತ್ತದೆ.
ಇ)	ಪ್ರಸಕ್ತ ಸಾಲಿನಲ್ಲಿ ಎಷ್ಟು ವಾಹನಗಳನ್ನು ಸದರಿ ಉದ್ದೇಶಕ್ಕಾಗಿ ಖರೀದಿಸಲಾಗಿದೆ;	2019-20ನೇ ಸಾಲಿನಲ್ಲಿ 40 ವಾಹನಗಳನ್ನು ಖರೀದಿಸಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ವಾಹನಗಳಲ್ಲಿ ಅವಶ್ಯವಿರುವ ವಿನ್ಯಾಸಗಳನ್ನು ಅಳವಡಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ.
ಈ)	ಈ ಯೋಜನೆಯಡಿಯಲ್ಲಿ ಎಷ್ಟು ಹಳ್ಳಿಗಳಿಗೆ ಭೇಟಿ ನೀಡಿ ರೈತರಿಗೆ ಸಹಾಯ ಮಾಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)	ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಸ್ಥಾಪನೆ ಕಾರ್ಯಕ್ಕೆ ಅನುವಾಗುವಂತೆ ವಾಹನಗಳಲ್ಲಿ ಅಳವಡಿಸಬೇಕಾದ ವಿನ್ಯಾಸ ಕಾರ್ಯ ಹಾಗೂ ಅಗತ್ಯವಿರುವ ಉಪಕರಣಗಳ ಅಳವಡಿಕೆ ಕಾರ್ಯ ಪ್ರಗತಿಯಲ್ಲಿದ್ದು, ಈ ಪ್ರಕ್ರಿಯೆಯು ಮುಕ್ತಾಯವಾದ ಕೂಡಲೇ ಕ್ಷೇತ್ರ ಭೇಟಿ ನೀಡಿ ರೈತರಿಗೆ ಯೋಜನೆಯ ಸೌಲಭ್ಯ ಒದಗಿಸಲಾಗುವುದು.

ಸಂಖ್ಯೆ:- ಕೃಇ/148/ಕೃಕೈಉ/2020

(ಬಿ.ಸಿ.ಪಾಟೀಲ್)

ಕೃಷಿ ಸಚಿವರು